# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಇವರನ್ನು ಪ್ರಮುಖ ಇಲಾಖಾ ಮುಖ್ಯಸ್ಥರೆಂದು ಘೋಷಿಸುವ ಕುರಿತು.

**ಓದಲಾಗಿದೆ** 1) ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 267 ಪಬವ 2013 ದಿನಾಂಕ 06.08.2013.

2) ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 696 ಸೇ-3/13 ದಿನಾಂಕ: 02.09.2013.

ಪ್ರಸ್ತಾವನೆ:-

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯವನ್ನು ರಚಿಸಲಾಗಿದೆ. ಮುಂದುವರೆದು, ಸದರಿ ಆದೇಶದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ . ಈ ಹಿಂದೆ ಅಸ್ತಿತ್ವದಲ್ಲಿದ್ದ ನಿರ್ದೇಶಕರ ಹುದ್ದೆಯನ್ನು ಆಯುಕ್ತರು, ಗ್ರಾಮೀಣಾಭಿವೃದ್ಧಿ ಎಂಬುದಾಗಿ ಮೇಲ್ದರ್ಜೆಗೇರಿಸಲಾಗಿದೆ. ಸದರಿ ಆಯುಕ್ತರ ಹುದ್ದೆಯನ್ನು ಪ್ರಭಾರದ ಮೂಲಕ ಅಥವಾ ನಿಯತಕಾಲಿಕವಾಗಿ ಭರ್ತಿ ಮಾಡಿದ ದಿನಾಂಕದಿಂದ ಅದು ಜಾರಿಗೆ ಬರುತ್ತದೆ. ಅಲ್ಲದೆ, ಈ ಹುದ್ದೆಯನ್ನು ಭಾರತೀಯ ಆಡಳಿತ ಸೇವೆಗೆ ಸೇರಿದ ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿ / ಸರ್ಕಾರದ ಕಾರ್ಯದರ್ಶಿ ದರ್ಜೆಯ ಅಧಿಕಾರಿಯನ್ನು ನಿಯುಕ್ತಿ ಮಾಡುವ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಪ್ರಸ್ತಾವಿತ ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಇವರು ರಾಜ್ಯದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ರಾಜ್ಯ ಸರ್ಕಾರವು ಕಾಲ ಕಾಲಕ್ಕೆ ವಹಿಸಬಹುದಾದ ಇತರೆ ಗ್ರಾಮೀಣಾಭಿವೃದ್ಧಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಜವಾಬ್ದಾರಿಯನ್ನು ಹೊಂದಿದ್ದಾರೆ. ಇವರಿಗೆ ಸರ್ಕಾರದ ಪ್ರಮುಖ ಇಲಾಖಾ ಮುಖ್ಯಸ್ಥರು ಚಲಾಯಿಸುವ ಅಧಿಕಾರವನ್ನು ನೀಡಲು ಆರ್ಥಿಕ ಇಲಾಖೆಯೊಡನೆ ಸಮಾಲೋಚಿಸಿ ಪರಿಶೀಲಿಸಲಾಗಿದೆ. ಆರ್ಥಿಕ ಇಲಾಖೆಯು ಮೇಲೆ (2)ರಲ್ಲಿ ಓದಲಾದ ದಿನಾಂಕ: 02.09.2013ರ ಅನಧಿಕೃತ ಟಿಪ್ಪಣಿಯಲ್ಲಿ ಆಯುಕ್ತರು, ಗ್ರಾಮೀಣಾಭಿವೃದ್ಧಿ ರವರನ್ನು ಇಲಾಖಾ ಮುಖ್ಯಸ್ಥರೆಂದು ಘೋಷಿಸಲು ಸಹಮತಿ ನೀಡುತ್ತಾ, ಆರ್ಥಿಕ ಇಲಾಖೆಯು ಇಲಾಖಾ ಮುಖ್ಯಸ್ಥರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರವನ್ನು ಚಲಾಯಿಸಲು ಅಧಿಕಾರವುಳ್ಳರಾಗಿದ್ದಾರೆಂದು ತಿಳಿಸಿದ್ದಾರೆ. ಮುಂದುವರೆದು, ಈ ಬಗ್ಗೆ ಸರ್ಕಾರಿ ಆದೇಶವನ್ನು ಹೊರಡಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳ ಅಪೆಂಡಿಕ್ಸ್-1ರ ಪಟ್ಟಿಯಲ್ಲಿ ಸೇರಿಸುವ ಸಲುವಾಗಿ ಸದರಿ ಆದೇಶವನ್ನು ಕಳುಹಿಸಲು ತಿಳಿಸಿರುತ್ತದೆ.

ಮುಂದುವರೆದು, ಈ ಬಗ್ಗೆ ಪರಿಶೀಲಿಸಲಾಗಿ, ಆಯುಕ್ತರು, ಗ್ರಾಮೀಣಾಭಿವೃದ್ಧಿ ರವರು ಇಲಾಖಾ ಮುಖ್ಯಸ್ಥರಾಗಿ ಆರ್ಥಿಕ ಇಲಾಖೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರಗಳನ್ನು ಚಲಾಯಿಸುವುದರ ಜೊತೆಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಸಹ ಚಲಾಯಿಸಬೇಕಾಗಿರುತ್ತದೆ. ಸದರಿ ಸಿಸಿಎ ನಿಯಮಗಳಲ್ಲಿ "ಪ್ರಮುಖ ಇಲಾಖಾ ಮುಖ್ಯಸ್ಥರಿಗೆ ನಿರ್ದಿಷ್ಟವಾಗಿ ಶಿಸ್ತು ಕ್ರಮ ಕೈಗೊಳ್ಳಲು ಕೆಲವು ಅಧಿಕಾರ ಪ್ರದತ್ತವಾಗಿದೆ. ಆದುದರಿಂದ ಆ ನಿಯಮಗಳಡಿಯಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಲು "ಪ್ರಮುಖ ಇಲಾಖಾ ಮುಖ್ಯಸ್ಥರು" ಎಂಬುದಾಗಿ ಕರ್ನಾಟಕ ನಾಗರೀಕ ಸೇವಾ ನಿಯಮಗಳ ಅಪೆಂಡಿಕ್ಸ್-1ರ ಅಡಿಯಲ್ಲಿ ಆಯುಕ್ತರು, ಗ್ರಾಮೀಣಾಭಿವೃದ್ಧಿ ರವರನ್ನು ಸೇರಿಸುವುದು

ಅವಶ್ಯವಾಗಿದೆ. ಆದುದರಿಂದ, ಆಯುಕ್ತರು, ಗ್ರಾಮೀಣಾಭಿವೃದ್ಧಿ ರವರನ್ನು ಪ್ರಮುಖ ಇಲಾಖಾ ಮುಖ್ಯಸ್ಥರೆಂದು ಘೋಷಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳ ಅಪೆಂಡಿಕ್ಸ್-1ರ ಪಟ್ಟಿಯಲ್ಲಿ ಸೇರಿಸಲು ತೀರ್ಮಾನಿಸಲಾಗಿದೆ.

ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 304 ಪಬವ 2013**

**ಬೆಂಗಳೂರು ದಿನಾಂಕ: 07.09.2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಆಯುಕ್ತರು, ಗ್ರಾಮೀಣಾಭಿವೃದ್ಧಿ, ಇವರನ್ನು ಪ್ರಮುಖ ಇಲಾಖಾ ಮುಖ್ಯಸ್ಥರೆಂದು ಕರ್ನಾಟಕ ನಾಗರೀಕ ಸೇವಾ ನಿಯಮಗಳ 8 (21)ರ ಅಡಿಯಲ್ಲಿ ಈ ಮೂಲಕ ಸರ್ಕಾರವು ಘೋಷಿಸಿದೆ. ತತ್ಪರಿಣಾಮವಾಗಿ ಆಯುಕ್ತರು, ಗ್ರಾಮೀಣಾಭಿವೃದ್ಧಿ ರವರು ಆರ್ಥಿಕ ಇಲಾಖೆಯು ಪ್ರಮುಖ ಇಲಾಖಾ ಮುಖ್ಯಸ್ಥರಿಗೆ ಕಾಲ ಕಾಲಕ್ಕೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರಗಳನ್ನು ಚಲಾಯಿಸಲು ಅಧಿಕಾರವುಳ್ಳವರಾಗಿದ್ದಾರೆ.

ಮುಂದುವರೆದು, ಸಧರಿ ಅಧಿಕಾರಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ಅಡಿಯಲ್ಲಿ ಪ್ರಮುಖ ಇಲಾಖಾ ಮುಖ್ಯಸ್ಥರಿಗೆ ಪ್ರದತ್ತವಾಗಿರುವ ಅಧಿಕಾರವನ್ನು ಸಹ ಚಲಾಯಿಸಲು ಅಧಿಕಾರವುಳ್ಳವರಾಗಿದ್ದಾರೆ.

ಆಯುಕ್ತರು, ಗ್ರಾಮೀಣಾಭಿವೃದ್ಧಿ ಹುದ್ದೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳ ಅಪೆಂಡಿಕ್ಸ್-1 ರ ಪ್ರಮುಖ ಇಲಾಖಾ ಮುಖ್ಯಸ್ಥರ ಪಟ್ಟಿಯಲ್ಲಿ ಸೇರಿಸಲು ಆರ್ಥಿಕ ಇಲಾಖೆಯು ಪ್ರತ್ಯೇಕವಾಗಿ ಕ್ರಮ ಜರುಗಿಸುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 696 ಸೇ-3/13 ದಿನಾಂಕ: 02.09.2013ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2) ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ,
4) ಅಭಿವೃದ್ಧಿ ಆಯುಕ್ತರು ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ
5) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು /ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು,
6) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು

7) ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಬೆಳಗಾಂ, ಮೈಸೂರು ಮತ್ತು ಗುಲ್ಬರ್ಗ ವಿಭಾಗ

8) ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

9) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು

10) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

11) ನಿಯಂತ್ರಕರು, ರಾಜ್ಯ ಲೆಕ್ಕ ಪತ್ರ ಇಲಾಖೆ, ಕಾವೇರಿ ಭವನ, ಬೆಂಗಳೂರು

12) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು

13) ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು

14) ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.

15) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು. ಕಾರ್ಯದರ್ಶಿಗಳು,(ಪಂ.ರಾಜ್), ಹೆಚ್ಚುವರಿ ಕಾರ್ಯದರ್ಶಿ(ಆಡಳಿತ), ಉಪ ಕಾರ್ಯದರ್ಶಿ(ಆಡಳಿತ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರುಗಳು,

16) ಎಲ್ಲಾ ನಿರ್ದೇಶಕರುಗಳು/ಮುಖ್ಯಸ್ಥರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು

20)ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,

21) ನಿರ್ದೇಶಕರು, NIC, ಬೆಂಗಳೂರು

22)ಸಿಸ್ಟಂ ಮ್ಯಾನೇಜರ್, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,

23) ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು

24)ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ತರಬೇತಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು

25) ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಪತ್ರ ಮುಖೇನ.

26)ಮುಖ್ಯ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿ, ಕರ್ನಾಟಕ ವಿಕಾಸ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರಿಗೆ- ಮುಂದಿನ ಸಂಚಿಕೆಯಲ್ಲಿ ಇದನ್ನು ಪ್ರಚುರ ಪಡಿಸಲು ಕೋರಿದೆ.

27)ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.